# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 48(5) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ: ಜಿಪಂಚಿ / ಆಡಳಿತ / ನೀ.ತೋ/ಅ.ವ್ಯ/ಕಾಕೇನೋ/ಸಿಆರ್/ 2018-19/ 675, ದಿನಾಂಕ: 16/11/2018.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1135/ಗ್ರಾಪಂಅ/2018, ದಿನಾಂಕ: 02/02/2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಕಾರಣ ಕೇಳುವ ನೋಟೀಸ್ ದಿನಾಂಕ: 03/06/2019.
4) ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರು ಕಾರಣ ಕೇಳುವ ನೊಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 17/06/2019.
5) ವಿಚಾರಣಾಧಿಕಾರಿಗಳ ವಿಚಾರಣಾ ವರದಿ.ನಂ.ಪ್ರಾಆಕ/ಅಭಿವೃದ್ಧಿ/ಸಿಆರ್/05/2019-20. ದಿನಾಂಕ: 05.12.2019

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಪತ್ರದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರು ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಗಾನಹಳ್ಳಿ ಮತ್ತು ಚೀಮಂಗಲ ಗ್ರಾಮಗಳ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮ ಜರುಗಿಸುವ ಕುರಿತು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಇವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5)ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ವಿಚಾರಣಾಧಿಕಾರಿಗಳು ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರಿಗೆ ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಗಾನಹಳ್ಳಿ ಮತ್ತು ಚೀಮಂಗಲ ಗ್ರಾಮಗಳ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ವಿಚಾರಣ ದಿನಾಂಕದಂದು ಸಂಬಂಧಪಟ್ಟ ಎಲ್ಲಾ ಸಮರ್ಥನೀಯ ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗಿ, ತಮ್ಮ ತಮ್ಮ ಲಿಖಿತ ಹೇಳಿಕೆಗಳನ್ನು ಸಲ್ಲಿಸುವಂತೆ ದಿನಾಂಕ: 03.06.2019 ರಂದು ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ, ದಿನಾಂಕ: 03.06.2019 ರಂದು ಜಾರಿಗೊಳಿಸಿದ್ದ ಕಾರಣ ಕೇಳುವ ನೋಟೀಸ್‌ಗೆ ಶ್ರೀಮತಿ ನಳಿನಾ.ಎನ್ ದಿನಾಂಕ: 17.06.2019 ರಂದು ಈ ಕೆಳಕಂಡಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಿರುತ್ತಾರೆ:-

ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕು, ಚೀಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ಆದ ನಾನು ದಿನಾಂಕ: 10.07.2015 ರಿಂದ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಅಧಿಕಾರವನ್ನು ವಹಿಸಿಕೊಂಡಿರುತ್ತೇನೆ.

ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಗಾನಹಳ್ಳಿ ಮತ್ತು ಚೀಮಂಗಲ ಗ್ರಾಮಗಳ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಪ್ರಥಮವಾಗಿ ಬಹಿರಂಗ ಹರಾಜು ದಿನಾಂಕ: 13.05.2015 ರಂದು ಹಿಂದಿನ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಬಿ.ಈಶ್ವರ್ ಹಾಗೂ ಶ್ರೀ ಎಂ.ಮುನಿನಾರಾಯಣ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ಸಮ್ಮುಖದಲ್ಲಿ ನಡೆದಿರುತ್ತದೆ. ನಾನು ಚೀಮಂಗಲ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ದಿನಾಂಕ: 10.07.2015 ರಿಂದ ಅಧಿಕಾರವನ್ನು ವಹಿಸಿಕೊಂಡಿರುತ್ತೇನೆ. ಇದೇ ನೀಲಗಿರಿ ಮರಗಳ ಹರಾಜು ಪ್ರಕಿಯೆ ಮುಗಿದ ನಂತರ ಶಿಡ್ಲಘಟ್ಟ ಜೆ.ಎಂ.ಎಫ್.ಸಿ ನ್ಯಾಯಾಲಯದಲ್ಲಿ ಅರ್ಜಿದಾರರಾದ ಶ್ರೀ ಚೌಡಪ್ಪ ಮತ್ತು ಇತರರು ದಾವೆ ಹೂಡಿದ್ದು, ದಾವೆ ಸಂಖ್ಯೆ: 119/2015 ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಧೀಶರು ದಿನಾಂಕ: 31.08.2016 ರಂದು ತೀರ್ಪನ್ನು ನೀಡಿ ಆದೇಶಿರುತ್ತಾರೆ. ಆದರೆ ಶ್ರೀ ವಾಲಿಬಾಷಾ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಯಾದ ಇವರು ಅಧ್ಯಕ್ಷರ ಪ್ರಭಾರದಲ್ಲಿದ್ದ ನನಗೆ ನ್ಯಾಯಾಲಯದ ತೀರ್ಪಿನ ಆದೇಶದ ಬಗ್ಗೆ ಮಾಹಿತಿ ನೀಡದೇ ಬೇಜವಾಬ್ದಾರಿಯಿಂದ ವರ್ತಿಸಿರುತ್ತಾರೆ ಹಾಗೂ ಅಧ್ಯಕ್ಷರಾದ ಮೇಲೆ ನಾನು ಹರಾಜು ಪ್ರಕಿಯೆಗೆ ಸಂಬಂಧಿಸಿದಂತೆ ಯಾವುದೇ ಆದೇಶವನ್ನು ಮೌಖಿಕವಾಗಲಿ, ಲಿಖಿತ ರೂಪದಲ್ಲಾಗಲಿ ನೀಡಿರುವುದಿಲ್ಲವೆಂದು ಎಂದು ತಿಳಿಸಿದ್ದಾರೆ.

ಹರಾಜು ಪ್ರಕ್ರಿಯೆಯಿಂದ ಸ್ವೀಕೃತವಾದ ಒಟ್ಟು ರೂ. 12,48,580/- ಗಳಲ್ಲಿ ಹಿಂದಿನ ಆಡಳಿತ ಮಂಡಳಿಯ ಅವಧಿಯಲ್ಲಿ ರೂ. 7,48,580/- ಗಳನ್ನು ವೆಚ್ಚ ಮಾಡಿದ್ದು, ಉಳಿದ ರೂ. 5,00,000/- ಗಳನ್ನು ಪಂಚಾಯತ್ ರಾಜ್ ಕಾಯ್ದೆರನ್ವಯ ಸಾಮಾನ್ಯ ಸಭೆಯಲ್ಲಿ ಅನುಮೋದನೆ ಪಡೆದು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸಿಕೊಳ್ಳಲಾಗಿದೆ.

ಈ ಹರಾಜು ಪ್ರಕ್ರಿಯೆಗೆ ಸಂಬಂಧಿಸಿದ ದೂರುಗಳು ಗ್ರಾಮ ಪಂಚಾಯಿತಿ ಕಛೇರಿಗೆ ಬಂದಕೂಡಲೇ ಅಧ್ಯಕ್ಷರ ಗಮನಕ್ಕೆ ತಿಳಿಸದೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ವಲ್ಲಿಬಾಷಾ ರವರು ಕರ್ತವ್ಯ ಲೋಪವೆಸಗಿರುತ್ತಾರೆ. ಹಾಗೂ ಶ್ರೀ ವಲ್ಲಿಬಾಷಾ ರವರೆ ಕಟಾವು ಮಾಡಿಸಿರುವುದು ಅರಣ್ಯ ನೌಕರರಿಂದ ತಿಳಿದುಬಂದಿರುವುದರಿಂದ ಇವರೇ ನೇರ ಹೊಣೆಯಾಗಿರುತ್ತಾರೆ. ನಾನು ಮಹಿಳಾ ಅಧ್ಯಕ್ಷಳಾಗಿದ್ದು, ಕರ್ತವ್ಯ ನಿರ್ವಹಿಸುತ್ತಿದ್ದು ನನ್ನ ಮೇಲೆ ರಾಜಕೀಯ ಪ್ರೇರಿತ ಉದ್ದೇಶದಿಂದ ತೇಜೋವಧೆ ಮಾಡುವ ಸಲುವಾಗಿ ನನ್ನ ಮೇಲೆ ಆರೋಪ ಮಾಡಿದ್ದು, ಸದರಿ ಪ್ರಕರಣದಿಂದ ಕೈ ಬಿಡಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ವಿಚಾರಣಾಧಿಕಾರಿಗಳು ಶ್ರೀಮತಿ ನಳಿನಾ.ಎನ್, ಅಧ್ಯಕ್ಷರು, ಚೀಮಂಗಲ ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಗಾನಹಳ್ಳಿ ಮತ್ತು ಚೀಮಂಗಲ ಗ್ರಾಮಗಳ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧ ಇರುವ ದೂರಿನ ಬಗ್ಗೆ ಶ್ರೀಮತಿ ನಳಿನಾ.ಎನ್ ರವರಿಗೆ ದಿನಾಂಕ: 03.06.2019 ರಂದು ಕಾರಣ ಕೇಳಿ ನೋಟೀಸ್ ನೀಡಿ ಲಿಖಿತ ವಿವರಣೆ ನೀಡುವಂತೆ ತಿಳಿಸಲಾಗಿರುತ್ತದೆ. ಈ ಸಂಬಂಧ ದಿನಾಂಕ: 17.06.2019 ರಂದು ಲಿಖಿತ ಹೇಳಿಕೆ ನೀಡಿರುತ್ತಾರೆ. ಈ ವಿಚಾರದ ಬಗ್ಗೆ ದಿನಾಂಕ: 29.04.2019, 17.06.2019, 15.07.2019, 30.08.2019, 20.09.2019 ಹಾಗೂ 23.09.2019 ರಂದು ವಿಚಾರಣೆ ನಡೆಸಲಾಗಿರುತ್ತದೆ. ಈ ವಿಷಯವಾಗಿ ಶಿಡ್ಲಘಟ್ಟ ಜೆ.ಎಂ.ಎಫ್.ಸಿ ನ್ಯಾಯಾಲಯದಲ್ಲಿ ಓ.ಎಸ್.ನಂ. 119/2015 ರಂತೆ ಮೊಕದ್ದಮೆ ಮುಂದುವರೆದಿದ್ದರೂ, ಸಹ ತೋಪನ್ನು ಕಟಾವು ಮಾಡಿ, ಗ್ರಾಮ ಪಂಚಾಯಿತಿಗೆ ಲಕ್ಷಾಂತರ ರೂಪಾಯಿಗಳು ನಷ್ಟವನ್ನುಂಟು ಮಾಡಿರುವ ಸಂಬಂಧ ಸಾರ್ವಜನಿಕರು ಕೇಳಿದಾಗ ಇದಕ್ಕೆ ಬೇಜವಾಬ್ದಾರಿ ಉತ್ತರವನ್ನು ನೀಡಿರುವುದು ಮುಖ್ಯ ಕಾರ್ಯನಿರ್ವಾಹ ಅಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯಿತಿರವರು ಸಲ್ಲಿಸಿರುವ ವರದಿಯಿಂದ ದೃಢಪಟ್ಟಿರುತ್ತದೆ.

ಶ್ರೀಮತಿ ನಳಿನಾ.ಎನ್ ಅಧ್ಯಕ್ಷರು, ಚೀಮಂಗಲ ಗ್ರಾಮ ಪಂಚಾಯಿತಿರವರು ವಿಚಾರಣಾ ಸಮಯದಲ್ಲಿ ನೀಡಿರುವ ಹೇಳಿಕೆ ಮತ್ತು ಲಿಖಿತ ಹೇಳಿಕೆ ಅವರು ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಿದಾಗ ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ, ಕರ್ತವ್ಯಲೋಪ ಹಾಗೂ ಆಡಳಿತ ದುರಪಯೋಗ ಮಾಡಿರುವುದು ಕಂಡುಬರುತ್ತದೆ. ಆದ ಕಾರಣ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಹಿಂದಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಬಿ.ಈಶ್ವರ್‌ರವರಿಗೆ ನೋಟೀಸ್ ನೀಡಿ ದಿನಾಂಕ: 29.04.2019 ರಂದು ವಿಚಾರಣೆಗೆ ಹಾಜರಾಗಿ ಲಿಖಿತ ಹೇಳಿಕೆ ನೀಡುವಂತೆ ತಿಳಿಸಲಾಗಿತ್ತು. ಆದರೆ ಸದರಿರವರು ಅವರ ವಿರುದ್ಧ ಇರುವ ದೂರಿಗೆ ಸಂಬಂಧಿಸಿದಂತೆ ಲಿಖಿತ ಹೇಳಿಕೆ ನೀಡಿರುವುದಿಲ್ಲ. ಆದ ಕಾರಣ ಶ್ರೀ ಬಿ.ಈಶ್ವರ್‌ರವರು, ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ

ಎನ್ನಲಾದ ಅವ್ಯವಹಾರ, ಕರ್ತವ್ಯಲೋಪ ಹಾಗೂ ಆಡಳಿತ ದುರುಪಯೋಗ ಮಾಡಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೀಡಿರುವ ವರದಿಯಿಂದ ಕಂಡುಬಂದಿರುತ್ತದೆ. ಆದ ಕಾರಣ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಚೀಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಗಾನಹಳ್ಳಿ ಮತ್ತು ಚೀಮಂಗಲ ಗ್ರಾಮಗಳ ನೀಲಗಿರಿ ತೋಪಿನ ಹರಾಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿಡ್ಲಘಟ್ಟ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಗಣಪತಿಎಸ್‌ಸಾಕರೆ, ಶ್ರೀ ಗುರುಬಸಪ್ಪ ಹಾಗೂ ಚೀಮಂಗಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಎಂ.ಮುನಿನಾರಾಯಣ, ಶ್ರೀ ರಮಾಕಾಂತ, ಶ್ರೀ ವಲ್ಲಿಬಾಷಾ ಹಾಗೂ ಶ್ರೀ ಹರೀಶ್ ರವರು ಭಾಗಿಯಾಗಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೀಡಿರುವ ವರದಿಯಿಂದ ಹಾಗೂ ಸದರಿಯವರ ಸಮಜಾಯಿಸಿಗಳು ಸಮರ್ಪಕವಾಗಿಲ್ಲದೇ ಇರುವುದರಿಂದ ಈ ಪ್ರಕರಣಕ್ಕೆ ಕಾರಣರಾದ ಎಲ್ಲಾ ಅಧಿಕಾರಿ ವರ್ಗದವರನ್ನು ವಿಚಾರಣೆಗೆ ಒಳಪಡಿಸಿ ಸರ್ಕಾರಕ್ಕೆ ಆಗಿರುವ ಆರ್ಥಿಕ ನಷ್ಟವನ್ನು ಇವರಿಂದ ವಸೂಲಿ ಮಾಡುವ ಹಾಗೂ ಸದರಿಯವರುಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬಹುದಾಗಿರುತ್ತದೆ ಎಂದು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳು, ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳು ಹಾಗೂ ಶ್ರೀಮತಿ ನಳಿನಾ.ಎನ್ ಗ್ರಾಮ ಪಂಚಾಯಿತಿ ಅಧ್ಯಕ್ಷರು ನೀಡಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿದಾಗ ಚೀಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರು ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ, ಕರ್ತವ್ಯಲೋಪ ಹಾಗೂ ಆಡಳಿತ ದುರುಪಯೋಗ ಮಾಡಿರುವುದು ವಿಚಾರಣಾಧಿಕಾರಿಗಳ ವರದಿಯಿಂದ ಸ್ಪಷ್ಟವಾಗಿ ಕಂಡುಬಂದಿರುವುದರಿಂದ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ಇವರ ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು, ಹಿಂದಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಬಿ.ಈಶ್ವರ್, ಶಿಡ್ಲಘಟ್ಟ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಗಣಪತಿಎಸ್‌ಸಾಕರೆ, ಶ್ರೀ ಗುರುಬಸಪ್ಪ ಹಾಗೂ ಚೀಮಂಗಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಎಂ.ಮುನಿನಾರಾಯಣ, ಶ್ರೀ ರಮಾಕಾಂತ, ಶ್ರೀ ವಲ್ಲಿಬಾಷಾ ಹಾಗೂ ಶ್ರೀ ಹರೀಶ್ ರವರ ವಿರುದ್ಧ ಕ್ರಮ ಜರುಗಿಸಲು ಸರ್ಕಾರವು ನಿರ್ಣಹಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1156/ಗ್ರಾಪಂಅ/2019**
**ಬೆಂಗಳೂರು, ದಿನಾಂಕ: 18ನೇ ಜನವರಿ 2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕಿನ ಚೀಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ನಳಿನಾ.ಎನ್ ರವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವುದರಿಂದ ಮತ್ತು ಅವ್ಯವಹಾರ, ಕರ್ತವ್ಯಲೋಪ ಹಾಗೂ ಆಡಳಿತ ದುರುಪಯೋಗ ಮಾಡಿರುವುದು ರುಜುವಾತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 48(5) ರನ್ವಯ ತಕ್ಷಣದಿಂದಲೇ ಜಾರಿಗೆ ಬರುವಂತೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿದೆ.

ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಶಿಡ್ಲಘಟ್ಟ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ಚೀಮಂಗಲ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಚುನಾಯಿತ ಪ್ರತಿನಿಧಿಗಳಿಂದ ಸರ್ಕಾರಕ್ಕೆ ಆಗಿರುವ ಆರ್ಥಿಕ ನಷ್ಟವನ್ನು ವಸೂಲಿ ಮಾಡುವ ಹಾಗೂ ಸದರಿಯವರುಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ರವರಿಗೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 18/01/2020
(ನವೀನ್ ಕುಮಾರ್.ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18/01/20

**ಗೆ:**

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಶಿಡ್ಲಘಟ್ಟ ತಾಲ್ಲೂಕು ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೀಮಂಗಲ ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
5. ಶ್ರೀಮತಿ ನಳಿನಾ.ಎನ್, ಚೀಮಂಗಲ ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ. **(ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

****